**Akashvani : Bangalore**
**National Bulletin In Kannada**
**25.12.2024 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**25.12.2024 / 7.35 am**

**<><*<><>*><>**

ಮುಖ್ಯಾಂಶಗಳು

**೧. ವಿಶ್ವದಾದ್ಯಂತ ಕ್ರಿಸ್‌ಮಸ್ ಹಬ್ಬದ ಸಡಗರ; ರಾಷ್ಟ್ರಪತಿ, ಉಪರಾಷ್ಟ್ರಪತಿ ಅವರಿಂದ ಶುಭಾಶಯ**

**೨. ಇಂದು ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ೧೦೦ನೇ ಜನ್ಮಸ್ಮರಣೆ; ಉತ್ತಮ ಆಡಳಿತ ದಿನವಾಗಿ ಆಚರಣೆ**

**೩. ಪ್ರಧಾನಿ ನರೇಂದ್ರ ಮೋದಿ ಮಧ್ಯಪ್ರದೇಶ ಭೇಟಿ; ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ**

**೪. ಅಂತಾರಾಷ್ಟ್ರೀಯ ಮಹಿಳಾ ಏಕದಿನ ಕ್ರಿಕೆಟ್; ವೆಸ್ಟ್ ಇಂಡೀಸ್ ವಿರುದ್ಧ ಭಾರತಕ್ಕೆ ೧೧೫ ರನ್ ಜಯ**

**<><*<><>*><>**

ವಿಶ್ವದಾದ್ಯಂತ ಇಂದು ಕ್ರಿಸ್‌ಮಸ್ ಹಬ್ಬದ ಸಡಗರ. ಏಸು ಕ್ರಿಸ್ತನ ಜನ್ಮದಿನವಾದ ಇಂದು ಜಗತ್ತಿನಾದ್ಯಂತ ಕ್ರೈಸ್ತ ಬಂಧುಗಳು ತಮ್ಮ ಮನೆಗಳನ್ನು ವಿಶೇಷವಾಗಿ ಅಲಂಕರಿಸಿ, ಬಂಧು-ಬಾಂಧವರಲ್ಲಿ ಉಡುಗೊರೆಗಳನ್ನು ಪರಸ್ಪರ ನೀಡುವ ಮೂಲಕ ಸಡಗರ-ಸಂಭ್ರಮದಿಂದ ಆಚರಿಸುತ್ತಾರೆ.

**ಈ ಕುರಿತು ಹೆಚ್ಚಿನ ಮಾಹಿತಿ**

ಕ್ರಿಸ್‌ಮಸ್ ಹಬ್ಬದ ಹಿನ್ನೆಲೆ ಚರ್ಚ್‌ಗಳಲ್ಲಿಂದು ವಿಶೇಷ ಪ್ರಾರ್ಥನೆ, ಕ್ರಿಸ್‌ಮಸ್ ಆಚರಣೆಗಳು ಮತ್ತು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಯುದ್ಧದ ಪರಿಸ್ಥಿತಿಯ ನಡುವೆ ಏಸುವಿನ ಜನ್ಮಸ್ಥಳವಾದ ಬೆಥ್‌ಲೆಹೆಮ್‌ನಲ್ಲಿ ಕ್ರಿಸ್ಮಸ್ ಆಚರಿಸಲಾಗುತ್ತಿದ್ದು, ವಿದೇಶಿ ಪ್ರವಾಸಿಗರ ಬರದ ನಡುವೆ ಸಾಮಾನ್ಯವಾಗಿ ಮ್ಯಾಂಗರ್ ಸ್ಕ್ವೇರ್ ಅನ್ನು ಅಲಂಕರಿಸುವ ಹಬ್ಬದ ದೀಪಗಳು ಮತ್ತು ದೈತ್ಯ ಮರಗಳು ಕಂಡುಬಂದಿಲ್ಲ. ಏತನ್ಮಧ್ಯೆ, ಪೋಪ್ ಫ್ರಾನ್ಸಿಸ್ ಅವರು ೨೦೨೫ ರ ಪವಿತ್ರ ವರ್ಷವನ್ನು ಸ್ವಾಗತಿಸಿ, ಕ್ಯಾಥೋಲಿಕ್ ಚರ್ಚ್‌ನ ಆಚರಣೆಯನ್ನು ಉದ್ಘಾಟಿಸಿದರು.

**<><*<><>*><>**

ಕ್ರಿಸ್‌ಮಸ್ ಹಬ್ಬದ ಹಿನ್ನೆಲೆ ದೇಶದ ಜನತೆಗೆ, ವಿಶೇಷವಾಗಿ ಕ್ರೈಸ್ತ ಬಾಂಧವರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಸೇರದಂತೆ ಇತರೆ ಗಣ್ಯರು ಕ್ರಿಸ್‌ಮಸ್ ಹಬ್ಬದ ಶುಭಾಶಯ ಕೋರಿದ್ದಾರೆ. ತಮ್ಮ ಸಂದೇಶದಲ್ಲಿ ರಾಷ್ಟ್ರಪತಿ ಅವರು, ಏಸುಕ್ರಿಸ್ತರ ಪ್ರೀತಿ ಮತ್ತು ಸೌಹಾರ್ಧತೆಯ ಸಂದೇಶವನ್ನು ಜನರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅವರ ಬಾತೃತ್ವ ಮತ್ತು ಎಲ್ಲರ ಕಲ್ಯಾಣದ ದೃಷ್ಟಿಕೋನ ಜಗತ್ತನ್ನು ಇನ್ನೂ ಉತ್ತಮವಾಗಿಸುವಲ್ಲಿ ದಾರಿ ತೋರುತ್ತಿದೆ ಎಂದು ಹೇಳಿದ್ದಾರೆ. ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಕ್ರಿಸ್‌ಮಸ್ ಹಬ್ಬದ ಶುಭಾಶಯ ಕೋರಿದ್ದು, ಈ ಹಬ್ಬ ಭರವಸೆ ಮತ್ತು ಐಕ್ಯತೆಯ ಸಂದೇಶ ಸಾರುತ್ತದೆ. ಎಂದಿಗೂ ಪ್ರಸ್ತುತವಾಗಿರುವ ಏಸುಕ್ರಿಸ್ತರ ಬೋಧನೆಗಳು ಜನರಿಗೆ ಪರಸ್ಪರ ಗೌರವ, ತಿಳುವಳಿಕೆ, ಸಹಾನುಭೂತಿಯ ಮೂಲಭೂತ ಮಹತ್ವವನ್ನು ನೆನಪಿಸಿಕೊಡುತ್ತವೆ ಎಂದಿದ್ದಾರೆ.

<><*<><>*><>

ಇಂದು ಮಾಜಿ ಪ್ರಧಾನಮಂತ್ರಿ ಅಟಲ್ ಬಿಹಾರಿ ವಾಜಪೇಯಿ ಅವರ ೧೦೦ನೇ ಜನ್ಮದಿನವಾಗಿದೆ. ಈ ದಿನವನ್ನು ಉತ್ತಮ 'ಆಡಳಿತದ ದಿನ'ವಾಗಿ ಕೂಡ ಆಚರಿಸಲಾಗುತ್ತದೆ. ರಾಷ್ಟ್ರ ರಾಜಧಾನಿಯಲ್ಲಿ ಅವರ ಸಮಾಧಿ "ಸದೈವ ಅಟಲ್" ನಲ್ಲಿ ಅವರಿಗೆ ಇಂದು ಗೌರವನಮನ ಸಲ್ಲಿಸಲಾಗುತ್ತದೆ.

**ಈ ಕುರಿತು ಹೆಚ್ಚಿನ ಮಾಹಿತಿ**

೧೯೨೪ ಡಿಸೆಂಬರ್ ೨೫ ರಂದು ಗ್ವಾಲಿಯರ್‌ನಲ್ಲಿ ಜನಿಸಿದ ಅಟಲ್ ಬಿಹಾರಿ ವಾಜಪಯಿ ಅವರು, ಬಹುಮುಖಿ ವ್ಯಕ್ತಿತ್ವ ಹೊಂದಿದ್ದರು. ಅವರು, ಒಬ್ಬ ಉತ್ತಮ ವಕ್ತಾರ, ಬರಹಗಾರ, ಕವಿ, ಅಪ್ರತಿಮ ಸಾಮಾಜಿಕ ಕಾರ್ಯಕರ್ತ, ಪತ್ರಕರ್ತರಾಗಿದ್ದರು. ತಮ್ಮ ನಾಯಕತ್ವದ ಗುಣಗಳಿಗೆ ಖ್ಯಾತಿ ಪಡೆದಿದ್ದ ಅವರು, ಸ್ವಾತಂತ್ರ್ಯ ನಂತರ ದೇಶವನ್ನು ಒಗ್ಗೂಡಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ದೇಶದ ಪ್ರಧಾನಿಯಾಗಿ ಮೂರು ಬಾರಿ ಸೇವೆ ಸಲ್ಲಿಸಿದ ಅವರ ಹೆಸರಿನಲ್ಲಿ ಹಲವು ಆರ್ಥಿಕ ನೀತಿಗಳು, ಮೂಲಸೌಕರ್ಯ ಯೋಜನೆಗಳು, ರಾಷ್ಟ್ರೀಯ ಹೆದ್ದಾರಿಗಳು ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ರಸ್ತೆ ಅಭಿವೃದ್ಧಿ ಸಹಿತ ಹಲವಾರು ಅಭಿವೃದ್ಧಿ ಯೋಜನೆಗಳಿವೆ. ಅವರ ನಾಯಕತ್ವದಡಿಯಲ್ಲಿ ಭಾರತ, ೧೯೯೮ ರಲ್ಲಿ ಪೋಖ್ರಾನ್-೨ ಪರಮಾಣು ಪರೀಕ್ಷೆಗಳನ್ನು ಯಶಸ್ವಿಯಾಗಿ ನಡೆಸಿತು ಮತ್ತು ದೇಶವನ್ನು ಪರಮಾಣು ರಾಷ್ಟ್ರವಾಗಿಸಿತು. ನಾಲ್ಕು ದಶಕಗಳ ಕಾಲ ಜನಪ್ರತಿನಿಧಿ ಸೇವೆ ಸಲ್ಲಿಸಿದ್ದ ಅವರು, ವಿದೇಶಾಂಗ ಸಚಿವರಾಗಿ, ೧೯೭೭ ರಲ್ಲಿ ವಿಶ್ವಸಂಸ್ಥೆಯಲ್ಲಿ ಹಿಂದಿಯಲ್ಲಿ ಮಾತನಾಡಿದ ಮೊದಲ ವ್ಯಕ್ತಿಯಾಗಿದ್ದರು. ದೇಶಕ್ಕೆ ಅವರು ನೀಡಿದ ಅತ್ಯಮೂಲ್ಯ ಕೊಡುಗೆಗಳಿಗೆ ೨೦೧೫ ರಲ್ಲಿ ಅವರನ್ನು ಭಾರತ ಸರ್ಕಾರದ "ಭಾರತ ರತ್ನ" ನೀಡಿ

ಗೌರವಿಸಿದೆ. ದೇಶ ಕಂಡ ಅಪ್ರತಿಮ ನಾಯಕನಾಗಿದ್ದ ಅವರು ೨೦೧೮ ರಲ್ಲಿ ಆಗಸ್ಟ್ ೧೬ ರಂದು ನಿಧನರಾದರು.

<><*<><>*><>

ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ೧೦೦ನೇ ಜನ್ಮದಿನದ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಇಂದು ಮಧ್ಯಪ್ರದೇಶಕ್ಕೆ ಭೇಟಿ ನೀಡಲಿದ್ದಾರೆ. ಅವರು, ಖಜರಾಹೋದಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಬಳಿಕ ಪ್ರಧಾನಿ ಅವರು, ಕೇನ್ ಬೆಟ್ವಾ ನದಿ ಸಂಪರ್ಕ ರಾಷ್ಟ್ರೀಯ ಯೋಜನೆಗೆ ಶಿಲಾನ್ಯಾಸ ಮಾಡಲಿದ್ದಾರೆ. ಇದು ದೇಶದ ನದಿಗಳ ಸಂಪರ್ಕ ಯೋಜನೆಯಾಗಿದೆ. ಈ ಯೋಜನೆಯು ಮಧ್ಯಪ್ರದೇಶ ಮತ್ತು ಉತ್ತರ ಪ್ರದೇಶದ ವಿವಿಧ ಜಿಲ್ಲೆಗಳಿಗೆ ನೀರಾವರಿ ಸೌಲಭ್ಯಗಳನ್ನು ಒದಗಿಸಿ, ಲಕ್ಷಾಂತರ ರೈತ ಕುಟುಂಬಗಳಿಗೆ ಪ್ರಯೋಜನವನ್ನು ನೀಡಲಿದೆ. ಈ ಯೋಜನೆಯಿಂದ ಈ ಭಾಗದ ಜನರಿಗೆ ಕುಡಿಯುವ ನೀರಿನ ಸೌಲಭ್ಯವು ದೊರೆಯಲಿದೆ. ಅಟಲ್ ಬಿಹಾರಿ ವಾಜಪೇಯಿ ಅವರು ೧೦೦ನೇ ಜನ್ಮ ವಾರ್ಷಿಕೋತ್ಸವದ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ ಅವರು, ವಾಜಪೇಯಿ ಅವರ ಸ್ಮರಣಾರ್ಥ ಅಂಚೆ ಚೀಟಿ ಮತ್ತು ನಾಣ್ಯವನ್ನು ಬಿಡುಗಡೆ ಮಾಡಲಿದ್ದಾರೆ. ೧ ಸಾವಿರದ ೧೫೩ ಅಟಲ್ ಗ್ರಾಮ ಸುಶಾಸನ ಕಟ್ಟಡಗಳ ಶಂಕು ಸ್ಥಾಪನೆಯನ್ನು ನೆರವೇರಿಸಲಿದ್ದಾರೆ. ಈ ಕಟ್ಟಡಗಳು ಸ್ಥಳೀಯ ಮಟ್ಟದಲ್ಲಿ ಉತ್ತಮ ಆಡಳಿತಕ್ಕೆ ಕಾರಣವಾಗುವ ಗ್ರಾಮ ಪಂಚಾಯಿತ್‌ಗಳ ಕಾರ್ಯ ಮತ್ತು ಜವಾಬ್ದಾರಿಗಳ ಪ್ರಾಯೋಗಿಕ ನಿರ್ವಹಣೆಯಲ್ಲಿ ಪ್ರಮುಖ ಪಾತ್ರವಹಿಸುತ್ತವೆ.

<><*<><>*><>

ಆಡಳಿತವನ್ನು ಸರಳೀಕರಿಸುವ ಜೊತೆಗೆ ನಾಗರಿಕ ಸ್ನೇಹಿಯಾಗಿಸಲು ಸುಮಾರು ಎರಡು ಸಾವಿರ ಅಪ್ರಸ್ತುತ ನಿಯಮಗಳು ಮತ್ತು ನಿಬಂಧನೆಗಳನ್ನು ರದ್ದುಗೊಳಿಸಲಾಗಿದೆ ಎಂದು ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆಗಳು ಮತ್ತು ಪಿಂಚಣಿಗಳ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ಹೇಳಿದ್ದಾರೆ. ಉತ್ತಮ ಆಡಳಿತ ದಿನದ ಮುನ್ನಾದಿನವಾದ ನಿನ್ನೆ ನವದೆಹಲಿಯಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಅವರು, ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ನಾಯಕತ್ವದಲ್ಲಿ ತಂದ ಪ್ರಮುಖ ಸಾಧನೆಗಳು ಮತ್ತು ಆಡಳಿತ ಸುಧಾರಣೆಗಳನ್ನು ವಿವರಿಸಿದರು. ಭಾರತದಲ್ಲಿ ಆಡಳಿತದ ಅರ್ಥವನ್ನು ಪುನರ್ ವ್ಯಾಖ್ಯಾನಿಸಿದ ಪಾರದರ್ಶಕತೆ, ನಾವೀನ್ಯತೆ ಮತ್ತು ಜನ-ಕೇಂದ್ರಿತ ನೀತಿಗಳಿಗೆ ಸರ್ಕಾರದ ಬದ್ಧತೆಯನ್ನು ಅವರು ಒತ್ತಿ ಹೇಳಿದರು. ಸಿಬ್ಬಂದಿ ತರಬೇತಿ ಇಲಾಖೆಯು ಊಳಿಗಮಾನ್ಯ ಪದ್ಧತಿಯನ್ನು ರದ್ದುಪಡಿಸುವ ಜೊತೆಗೆ ದಾಖಲೆಗಳನ್ನು

ದೃಢೀಕರಿಸಲು ಗೆಜೆಟೆಡ್ ಅಧಿಕಾರಿಯ ಮೊರೆಹೋಗದೆ ಯುವಕರು ಸ್ವಯಂ ದೃಢೀಕರಣ ಮಾಡಿಕೊಳ್ಳಲು ಅನುವು ಮಾಡಿಕೊಟ್ಟಿತು ಎಂದರು.

**<><*<><>*><>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಐದು ರಾಜ್ಯಗಳಲ್ಲಿ ರಾಜ್ಯಪಾಲರನ್ನು ನೇಮಿಸಿದ್ದಾರೆ. ಪ್ರಸ್ತುತ ಒಡಿಶಾ ರಾಜ್ಯಪಾಲ ರಘುಬರ್ ದಾಸ್ ರಾಜೀನಾಮೆ ನೀಡಿದ ನಂತರ ಮಿಜೋರಾಂ ರಾಜ್ಯಪಾಲ ಡಾ.ಹರಿಬಾಬು ಕಂಬಂಪತಿ ಅವರನ್ನು ಒಡಿಶಾದ ನೂತನ ರಾಜ್ಯಪಾಲರಾಗಿ ನೇಮಿಸಲಾಗಿದೆ. ಕೇಂದ್ರದ ಮಾಜಿ ಸಚಿವ ಜನರಲ್ ವಿಜಯ್ ಕುಮಾರ್ ಸಿಂಗ್ ಅವರನ್ನು ಮಿಜೋರಾಂ ರಾಜ್ಯಪಾಲರನ್ನಾಗಿ ನೇಮಿಸಲಾಗಿದೆ. ಬಿಹಾರದ ರಾಜ್ಯಪಾಲರಾಗಿ ಸೇವೆ ಸಲ್ಲಿಸುತ್ತಿರುವ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಅವರನ್ನು ಕೇರಳದ ರಾಜ್ಯಪಾಲರನ್ನಾಗಿ ನೇಮಿಸಲಾಗಿದೆ. ಆರಿಫ್ ಮೊಹಮ್ಮದ್ ಖಾನ್ ನಂತರ ಅವರು ಬಿಹಾರದ ರಾಜ್ಯಪಾಲರಾಗಲಿದ್ದಾರೆ. ಮಾಜಿ ಗೃಹ ಕಾರ್ಯದರ್ಶಿ ಅಜಯ್ ಕುಮಾರ್ ಭಲ್ಲಾ ಅವರನ್ನು ಮಣಿಪುರದ ರಾಜ್ಯಪಾಲರನ್ನಾಗಿ ನೇಮಿಸಲಾಗಿದೆ.

**<><*<><>*><>**

ಹೊಸದಾಗಿ ರಚಿಸಲಾದ ೧೦ ಸಾವಿರ ವಿವಿಧೋದ್ದೇಶ ಪ್ರಾಥಮಿಕ ಕೃಷಿ ಸಾಲ ಸಂಘಗಳು, ಡೈರಿ ಮತ್ತು ಮೀನುಗಾರಿಕಾ ಸಹಕಾರ ಸಂಘಗಳನ್ನು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರು ಇಂದು ಉದ್ಘಾಟಿಸಲಿದ್ದಾರೆ. ಕಳೆದ ಮಾರ್ಚ್‌ನಲ್ಲಿ ರಾಷ್ಟ್ರೀಯ ಸಹಕಾರಿ ದತ್ತಸಂಚಯವನ್ನು ದೆಹಲಿಯಲ್ಲಿ ಆರಂಭಿಸಿದ ಒಂಬತ್ತು ತಿಂಗಳ ಬಳಿಕ ಈ ಕಾರ್ಯಕ್ರವನ್ನು ಜಾರಿಗೊಳಿಸಲಾಗುತ್ತಿದೆ. ಇದು ಭಾರತದ ವಿಶಾಲವಾದ ಸಹಕಾರಿ ಕ್ಷೇತ್ರದ ಕುರಿತ ಪ್ರಮುಖ ಮಾಹಿತಿಯನ್ನು ಸೆರೆಹಿಡಿಯುವ ಗುರಿ ಹೊಂದಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿಯವರ "ಸಹಕಾರದಿಂದ ಸಮೃದ್ಧಿ' ಯ ದೃಷ್ಟಿಯನ್ನು ಈಡೇರಿಸುವ ನಿಟ್ಟಿನಲ್ಲಿ ಈ ಯೋಜನೆ ಸಹಕಾರಿಯಾಗಿದೆ.

**<><*<><>*><>**

ಉಪರಾಷ್ಟ್ರಪತಿ ಜಗದೀಪ್ ಧನ್ ಕರ್ ಇಂದಿನಿಂದ ಎರಡು ದಿನ ತೆಲಂಗಾಣದ ಮೇದಾಕ್ ಹಾಗೂ ಹೈದರಾಬಾದ್ ಗೆ ಭೇಟಿ ನೀಡಲಿದ್ದಾರೆ. ತೆಲಂಗಾಣದ ತುನಿಕಿಯಲ್ಲಿ ಭಾರತೀಯ ಕೃಷಿ ಸಂಶೋಧನಾ ಸಮಿತಿಯ ಕೃಷಿ ವಿಜ್ಞಾನ ಕೇಂದ್ರದಲ್ಲಿ ಆಯೋಜಿಸಲಾಗಿರುವ ನೈಸರ್ಗಿಕ ಮತ್ತು ಸಾವಯವ ರೈತರ ಸಮಾವೇಶದ ಅಧ್ಯಕ್ಷತೆಯನ್ನು ಉಪರಾಷ್ಟ್ರಪತಿ ವಹಿಸಲಿದ್ದಾರೆ.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ನವದೆಹಲಿಯ ನೀತಿ ಆಯೋಗ ಕಚೇರಿಯಲ್ಲಿ ಖ್ಯಾತ ಅರ್ಥಶಾಸ್ತ್ರಜ್ಞರೊಂದಿಗೆ ಬಜೆಟ್ ಪೂರ್ವ ಸಮಾಲೋಚನೆಯಲ್ಲಿ ಭಾಗವಹಿಸಿದ್ದರು. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ನೀತಿ ಆಯೋಗದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ವಿ.ಆರ್.ಸುಬ್ರಮಣ್ಯಂ ಮತ್ತು ಇತರೆ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು. ಕೇಂದ್ರ ಬಜೆಟ್ ೨೦೨೫-೨೬ ರ ಬಜೆಟ್ ಪೂರ್ವ ಸಮಾಲೋಚನೆಗಳು ಈ ತಿಂಗಳ ೬ ರಂದು ಪ್ರಾರಂಭವಾಯಿತು.  ಸಚಿವೆ ನಿರ್ಮಲಾ ಸೀತಾರಾಮನ್ ಅವರು, ವಿವಿಧ ರಾಜ್ಯಗಳ ಹಣಕಾಸು ಸಚಿವರು, ರೈತ ಸಂಘಗಳು, ಅರ್ಥಶಾಸ್ತ್ರಜ್ಞರು ಮತ್ತು ಎಂಎಸ್‌ಎಂಇ ಪ್ರಮುಖರೊಂದಿಗೆ ಸಮಾಲೋಚನೆ ನಡೆಸಿದರು. ಕೇಂದ್ರ ಹಣಕಾಸು ಸಚಿವರು ಮುಂಬರುವ ಫೆಬ್ರವರಿ ೧ ರಂದು ಲೋಕಸಭೆಯಲ್ಲಿ ೨೦೨೫-೨೬ ರ ಬಜೆಟ್ ಅನ್ನು ಮಂಡಿಸುವ ನಿರೀಕ್ಷೆಯಿದೆ.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರು, ಇದೇ ೨೯ ರಂದು ಆಕಾಶವಾಣಿಯಲ್ಲಿ ಪ್ರತಿ ತಿಂಗಳು ಪ್ರಸಾರವಾಗುವ ತಮ್ಮ ಜನಪ್ರಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ದೇಶ ಮತ್ತು ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಬೆಳಗ್ಗೆ ೧೧ ಗಂಟೆಗೆ ಈ ಕಾರ್ಯಕ್ರಮ ಪ್ರಸಾರವಾಗಲಿದ್ದು, ಇದು ಮನ್ ಕಿ ಬಾತ್‌ನ ೧೧೭ನೇ ಅವತರಣಿಕೆಯಾಗಿದೆ. ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳಲ್ಲಿ, ಆಕಾಶವಾಣಿ ಸುದ್ದಿ ಜಾಲತಾಣ, ಮೊಬೈಲ್ ಆಪ್ ಹಾಗೂ ಯೂಟ್ಯೂಬ್ ಚಾನಲ್‌ಗಳಲ್ಲೂ ಈ ಕಾರ್ಯಕ್ರಮ ಮೂಡಿಬರಲಿದೆ. ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವಾಲಯದ ಜಾಲತಾಣಗಳಲ್ಲೂ ಈ ಕಾರ್ಯಕ್ರಮ ಬಿತ್ತರಗೊಳ್ಳಲಿದೆ. ಹಿಂದಿ ಭಾಷೆಯ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲೂ ಈ ಕಾರ್ಯಕ್ರಮ ಮೂಡಿಬರಲಿದೆ.

**<><*<><>*><>**

ವಡೋದರಾದ ಕೊಟಂಬಿ ಸ್ಟೇಡಿಯಂನಲ್ಲಿ ನಿನ್ನೆ ನಡೆದ ಮಹಿಳಾ ಏಕದಿನ ಕ್ರಿಕೆಟ್ ಪಂದ್ಯದಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ಭಾರತ, ೧೧೫ ರನ್‌ಗಳ ಭರ್ಜರಿ ಗೆಲುವು ಸಾಧಿಸಿ, ಮೂರು ಪಂದ್ಯಗಳ ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್ ಸರಣಿಯನ್ನು ೨-೦ ಅಂತರದಿಂದ ವಶಪಡಿಸಿಕೊಂಡಿದೆ. ಭಾನುವಾರ ಇದೇ ಮೈದಾನದಲ್ಲಿ ನಡೆದ ಮೊದಲ ಏಕದಿನ ಪಂದ್ಯದಲ್ಲಿ ಭಾರತ ೨೧೧ ರನ್‌ಗಳಿಂದ ವೆಸ್ಟ್ ಇಂಡೀಸ್ ತಂಡವನ್ನು ಸೋಲಿಸಿತ್ತು. ಮೂರನೇ ಏಕದಿನ ಪಂದ್ಯ ಇದೇ ೨೭ರಂದು ನಡೆಯಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ**